



## ಹೊಸತನದ ಹುಡುಕಾಟ

12 ವರ್ಷಗಳಿಂದ ಕನ್ನಡ ಮನಸ್ಸನ್ನು ಕೇಂದ್ರವಾಗಿಟ್ಟುಕೊಂಡು ಬೇರೆ ಬೇರೆ ಪರಿಕಲ್ಪನೆ ಮಾಡಲಾಗಿತ್ತು. ಆಳ್ವಾಸ್ ವಿಶ್ವನುಡಿಸಿರಿ– ವಿರಾಸತ್ ಸಂದರ್ಭದಲ್ಲಿ ಮುಖ್ಯ ವಿಷಯ `ಕನ್ನಡ ಮನಸ್ಸು: ಅಂದು, ಇಂದು, ಮುಂದು' ಎಂದಿತ್ತು. ಕಳೆದ ವರ್ಷ 2016ರ ನುಡಿಸಿರಿಯ ಕೇಂದ್ರ ವಿಷಯವನ್ನು `ಕರ್ನಾಟಕ: ಹೊಸತನದ ಹುಡುಕಾಟ' ಎಂದು ಬದಲಾಯಿಸಲಾಗಿದೆ. ಏಕೆಂದರೆ ನಮ್ಮ ಬದುಕು, ಸಂಸ್ಕೃತಿ ನಿಂತ ನೀರಾಗಬಾರದು. ನಾವು ಯಾವತ್ತೂ ಹೊಸತನದ ಹುಡುಕಾಟದಲ್ಲಿರಬೇಕು. ಇಲ್ಲದಿದ್ದರೆ ನಾವು ಸವಕಲು ನಾಣ್ಯಗಳಾಗುತ್ತೇವೆ. ಹೊಸತನ ಇದ್ದರೆ ಚಲಾವಣೆಯಲ್ಲಿರುವ ನಾಣ್ಯಗಳಾಗುತ್ತೇವೆ. ಹೊಸತನದ ಹುಡುಕಾಟ ಇಂದಿನ ಅಗತ್ಯತೆ. ಕಾಲಕ್ಕೆ ಸರಿಯಾಗಿ ನಾವು ಸ್ಪಂದಿಸಬೇಕು ಹಾಗೂ ಅತ್ಯಂತ ಅವಶ್ಯಕವೂ ಹೌದು. ಈ ದೃಷ್ಟಿಯಲ್ಲಿ ನಾವು ನುಡಿಸಿರಿಯ ಕೇಂದ್ರ ವಿಷಯವನ್ನು `ಕರ್ನಾಟಕ:ಹೊಸತನದ ಹುಡುಕಾಟ' ಎಂದು ಬದಲಾಯಿಸಲಾಗಿತ್ತು.

ಸಿದ್ಧಗೊಂಡಿದೆ. ಎರಡೂವರೆ ಎಕರೆ ಪ್ರದೇಶದಲ್ಲಿ ಕೃಷಿಭೂಮಿಯನ್ನು ಸಿದ್ಧಪಡಿಸಲಾಗಿದ್ದು, ಇನ್ನುಳಿದ ಸ್ಥಳದಲ್ಲಿ ಕೃಷಿ ಸಂಬಂಧೀ ಕಾರ್ಯಗಳು ನಡೆಯಲಿವೆ. ಪ್ರಗತಿಪರ ರೈತರು, ಕೃಷಿ ಸಂಶೋಧಕರು ಸಮ್ಮೇಳನದಲ್ಲಿ ಭಾಗವಹಿಸಲಿದ್ದು ರೈತರ ಜೊತೆ ಮಾಹಿತಿ ವಿನಿಮಯ ಮಾಡಿಕೊಳ್ಳಲಿದ್ದಾರೆ. ಕೃಷಿ ಉಪಕರಣಗಳು ಹಾಗೂ ವಿವಿಧ ಬಗೆಯ ತಳಿಗಳ ವಸ್ತುಪ್ರದರ್ಶನ ನಡೆಯಲಿದೆ. ಜೊತೆಗೆ ಕೃಷಿ ಮಳಿಗೆಗಳಿಗೂ ಅವಕಾಶ ಕಲ್ಪಿಸಲಾಗಿದೆ.

### ಸಿನಿಮಾ ಪ್ರದರ್ಶನ

ಕನ್ನಡ ಸಂಸ್ಕೃತಿಯನ್ನು ಪ್ರತಿಬಿಂಬಿಸುವಲ್ಲಿ ಸಿನಿಮಾಗಳ ಪಾತ್ರ ಮಹತ್ವದ್ದು. ಹೀಗಾಗಿ ನುಡಿಸಿರಿಯ ಸಂದರ್ಭದಲ್ಲಿ 4 ದಿನಗಳ ಕಾಲ ಚಲನಚಿತ್ರ ಪ್ರದರ್ಶನಕ್ಕೆ ಏರ್ಪಾಟು ಮಾಡಲಾಗಿದೆ. ಇದಕ್ಕಾಗಿ ಕಾಲೇಜು ಆವರಣದಲ್ಲಿ ಮಿನಿ ಥಿಯೇಟರ್‌ವೊಂದನ್ನು ಸಿದ್ಧಪಡಿಸಲಾಗಿದ್ದು ದಿನವೊಂದಕ್ಕೆ 3 ಚಿತ್ರಗಳ ಪ್ರದರ್ಶನ ನಡೆಯಲಿದೆ. ವಿದ್ಯಾರ್ಥಿಸಿರಿ(ನವೆಂಬರ್ 30) ಯಂದು ಮಕ್ಕಳ ಚಲನಚಿತ್ರಗಳಿಗೆ ಆದ್ಯತೆ ನೀಡಲಾಗಿದ್ದು, ಉಳಿದ 3 ದಿನಗಳ ಕಾಲ ಸದಭಿರುಚಿಯ, ಕಲಾತ್ಮಕ ಚಿತ್ರಗಳನ್ನು ಪ್ರದರ್ಶಿಸಲಾಗುತ್ತಿದೆ.

ಪುಸ್ತಕ ಪ್ರದರ್ಶನ ಹಾಗೂ ವಿಜ್ಞಾನ ವಸ್ತು ಪ್ರದರ್ಶನ

ಕನ್ನಡ ಭಾಷೆ– ಪರಂಪರೆಯನ್ನು ಕಟ್ಟಿಬೆಳೆಸುವಲ್ಲಿ ಸಾಹಿತ್ಯದ ಪಾತ್ರ ಅತೀ ಮಹತ್ವದ್ದು. ಇಂತಹ ಸಾಹಿತ್ಯ ಕೃತಿಗಳನ್ನು ಕನ್ನಡಿಗರಿಗೆ ಪರಿಚಯಿಸಬೇಕು ಹಾಗೂ ಮಹಾನ್ ಸಾಹಿತಿಗಳ ಹಾಗೂ ವಿದ್ವಾಂಸರ ಸಾಹಿತ್ಯವನ್ನು ಒಂದೇ ಸೂರಿನಡಿಯಲ್ಲಿ ಕೊಡಬೇಕೆಂಬ ಉದ್ದೇಶ ಆಳ್ವಾಸ್ ನುಡಿಸಿರಿಯದ್ದು. ಹೀಗಾಗಿ ಸಮ್ಮೇಳನದ ಸಂದರ್ಭದಲ್ಲಿ ಪ್ರತಿಷ್ಠಿತ ಪ್ರಕಾಶನ ಸಂಸ್ಥೆಗಳಿಗೆ ಮಳಿಗೆಗಳನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ. ಪುಸ್ತಕ ಪ್ರದರ್ಶನದ ಸಂದರ್ಭದಲ್ಲಿ ಆಸಕ್ತರು ಪುಸ್ತಕಗಳನ್ನು ಖರೀದಿಸಬಹುದಾಗಿದೆ.

ಇನ್ನು ವಿಜ್ಞಾನ ವಸ್ತುಪ್ರದರ್ಶನ ಈ ಸಲದ ನುಡಿಸಿರಿಯ ಹೊಸಪಯತ್ನವಾಗಿದ್ದು, ಅನೇಕ ವಿಜ್ಞಾನ ಮಾದರಿಗಳನ್ನು, ಮಾಹಿತಿಗಳನ್ನು ಜನರ ಮುಂದಿಡುವ ಪ್ರಯತ್ನ ಮಾಡಲಾಗುತ್ತಿದೆ.

### ಉದ್ಯೋಗಸಿರಿ

'ಉದ್ಯೋಗಸಿರಿ' ಈ ಬಾರಿ ನುಡಿಸಿರಿಗೆ ಹೊಸ ಆಯಾಮವನ್ನು ಒದಗಿಸಲಿದೆ. ಕೇವಲ ಸಾಹಿತ್ಯಿಕ, ಸಾಂಸ್ಕೃತಿಕ ರಸದೌತಣವನ್ನು